# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **175**
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : **05/12/2023**
ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಮಂಡ್ಯ ಜಿಲ್ಲೆ, ಮಳವಳ್ಳಿ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಚಿಂತಿಸಿರುವುದೇ; ಹಾಗಿದ್ದಲ್ಲಿ, ಸದರಿ ಯೋಜನೆಯ ರೂಪುರೇಷೆಗಳೇನು; | ಮಂಡ್ಯ ಜಿಲ್ಲೆಯ ಮಳವಳ್ಳಿ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ರವರು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪೌರಾಡಳಿತ ನಿರ್ದೇಶಕರು ನಿಯಮಾನುಸಾರ ಪರಿಶೀಲಿಸಿ, ಪ್ರಸ್ತಾವನೆಯನ್ನು ದಾಖಲೆಗಳು ಮತ್ತು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯಲ್ಲಿ ಈ ಕೆಳಕಂಡ ಗ್ರಾಮಗಳನ್ನು ಮಳವಳ್ಳಿ ಪುರಸಭೆ ವ್ಯಾಪ್ತಿಗೆ |
| ಆ | ನಗರಸಭಾ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಯಾಗುತ್ತಿರುವ ಆಸುಪಾಸಿನ ಗ್ರಾಮಗಳಾವುವು (ಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು); | ಸೇರ್ಪಡೆಗೊಳಿಸಿ, ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕೋರಲಾಗಿರುತ್ತದೆ:<br>1) ನಾಗೇಗೌಡನದೊಡ್ಡಿ ಗ್ರಾಮಪಂಚಾಯಿತಿಯ–<br>(1) ತಮ್ಮಡಹಳ್ಳಿ (2) ಅಂಚೇದೊಡ್ಡಿ.<br>2) ನಿಡಘಟ್ಟ ಗ್ರಾಮ ಪಂಚಾಯಿತಿಯ–<br>(3) ನಿಡಘಟ್ಟ (4) ಕ್ಯಾತೇಗೌಡನದೊಡ್ಡಿ |
| ಇ | ಯಾವ ಕಾಲಮಿತಿಯಲ್ಲಿ ನಗರಸಭೆಯನ್ನು ಅಸ್ತಿತ್ವಕ್ಕೆ ತರಲಾಗುವುದು? | (5) ಚೋಳನಹಳ್ಳಿ<br>3) ಶೆಟ್ಟಹಳ್ಳಿ ಗ್ರಾಮ ಪಂಚಾಯಿತಿಯ–<br>(6) ಶೆಟ್ಟಹಳ್ಳಿ (7) ಮೂಗನಕೊಪ್ಪ (8) ಮಾಗನೂರು<br>(9) ಮಾಗನೂರು ಕಾಲೋನಿ (10) ಎಂ.ಬಸವನಪುರ<br>4) ರಾಗಿಬೊಮ್ಮನಹಳ್ಳಿ ಗ್ರಾಮ ಪಂಚಾಯಿತಿಯ–<br>(11) ರಾಗಿಬೊಮ್ಮನಹಳ್ಳಿ (12) ಹುಚ್ಚನದೊಡ್ಡಿ<br>5) ಕಂದೇಗಾಲ ಗ್ರಾಮ ಪಂಚಾಯಿತಿಯ–<br>(13) ಅಂಕನಹಳ್ಳಿ<br><br>ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ–3 ರನ್ವಯ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳು:<br>1) ಅಂಥ ಪ್ರದೇಶದ ಜನಸಂಖ್ಯೆ ಐವತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಹೊರತು;<br>2) ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ಒಂದು ಸಾವಿರದ ಐದುನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು; |

| | | |
|---|---|---|
| | | 3) ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂಥ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಿಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬನಿಗೆ ನಲವತ್ತೈದು ರೂಪಾಯಿಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆಯಿರದ ಹೊರತು;<br>4) ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು.<br><br>ಮೇಲ್ದರ್ಜೆಗೇರಿಸಲಾಗುವ ಪ್ರದೇಶದಲ್ಲಿ ಜಿಲ್ಲಾ ಕೇಂದ್ರ ಕಾರ್ಯಸ್ಥಾನ ಇದ್ದಲ್ಲಿ, ಆ ಪ್ರದೇಶವು 50,000 ಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ನಗರಸಭೆಯನ್ನಾಗಿ ಪರಿವರ್ತಿಸಬಹುದಾಗಿದೆ.<br><br>ಪ್ರಸ್ತುತ, ಹೆಚ್ಚುವರಿ ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತಾಲಯ, ಗೃಹ ಮಂತ್ರಾಲಯ, ನವದೆಹಲಿ ರವರ ನಿರ್ದೇಶನದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳನ್ನ ಮೇಲ್ದರ್ಜೆಗೇರಿಸಲು ಹಾಗೂ ಗಡಿಗಳನ್ನು ವಿಸ್ತರಿಸಲು ದಿನಾಂಕ:31/12/2023 ರವರೆಗೆ ಕಾಲಾವಕಾಶ ನಿಗದಿಪಡಿಸಿ ಕಂದಾಯ ಇಲಾಖೆಯಿಂದ ಆದೇಶವನ್ನು ಹೊರಡಿಸಲಾಗಿರುತ್ತದೆ. ಆದ್ದರಿಂದ, ಪ್ರಸ್ತಾವನೆಯನ್ನು ಕರ್ನಾಟಕ ಪೌರಸಭೆಗಳ ಕಾಯ್ದೆ 1964 ರನ್ವಯ ಪರಿಶೀಲಿಸಿ ಕ್ರಮವಹಿಸುತ್ತಿದ್ದು, ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಮತಿ ದೊರೆತ ನಂತರ, ನಿಯಮಾನುಸಾರ ಮಾನದಂಡಗಳನ್ನು ಪೂರೈಸುತ್ತಿದ್ದಲ್ಲಿ ಮುಂದಿನ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ:ನಅಇ 24 ಎಲ್‌ಸಿಕ್ಯೂ 2023.**

(ರಹೀಂ ಖಾನ್)
**ಪೌರಾಡಳಿತ ಹಾಗೂ ಹಜ್ ಸಚಿವರು**